## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1062 |
| ಸದಸ್ಯರ ಹೆಸರು | ಡಾ. ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 23.02.2024 |
| ಉತ್ತರಿಸುವವರು | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ ಮೂರು ವರ್ಷಗಳಲ್ಲಿ ಪ್ರತಿ ಗ್ರಾಮ ಪಂಚಾಯಿತಿಗೆ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು | ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಗ್ರಾಮ ಪಂಚಾಯತಿಗಳಿಗೆ ವಿವಿಧ ಯೋಜನೆ / ಕಾರ್ಯಕ್ರಮಗಳಡಿ ವಾರ್ಷಿಕವಾಗಿ ಬಿಡುಗಡೆ ಮಾಡಿರುವ ಅನುದಾನದ ವಿವರ ಈ ಕೆಳಕಂಡಂತಿದೆ. |
| (ಆ) | ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನವನ್ನು ಬಿಡುಗಡೆಗೊಳಿಸಲಾಗಿದೆ. | (ಕೆಳಗಿನ ಕೋಷ್ಟಕ ಮತ್ತು ವಿವರಣೆ ನೋಡಿ) |

| ಕ್ರ. ಸಂ | ಯೋಜನೆ / ಕಾರ್ಯಕ್ರಮ | ಅನುದಾನದ ಮೊತ್ತ (ಕೋಟಿಗಳಲ್ಲಿ) | | |
|---|---|---|---|---|
| | | 2020-21 | 2021-22 | 2022-23 |
| 1 | ಶಾಸನಬದ್ಧ ಅನುದಾನ | 902.99 | 902.99 | 1203.42 |
| 2 | 15ನೇ ಹಣಕಾಸು ಆಯೋಗದ ಅನುದಾನ | 2734.45 | 2019.17 | 2093.55 |
| 3 | ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ | 4161.18 | 4637.99 | 5002.04 |
| 4 | ಸ್ವಚ್ಛ ಭಾರತ ಮಿಷನ್ (ಗ್ರಾಮೀಣ) | 590.00 | 126.16 | 235.65 |
| 5 | ಜಲಜೀವನ್ ಮಿಷನ್ | 2767.20 | 6837.51 | 5543.44 |
| 6 | ಅಮೃತ ಗ್ರಾಮ ಪಂಚಾಯತಿ ಯೋಜನೆ | - | - | 187.625 |

ಸ್ವಚ್ಛ ಭಾರತ ಮಿಷನ್ ಗ್ರಾಮೀಣ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಮತ್ತು ರಾಜ್ಯದ ಪಾಲಿನ ಅನುದಾನ ಸೇರಿದಂತೆ ಒಟ್ಟು ಮೊತ್ತ ಯೋಜನಾ ಬ್ಯಾಂಕ್ ಖಾತೆಗೆ ಜಮೆ ಮಾಡಿ ಜಿಲ್ಲೆಗಳಿಗೆ ಬೇಡಿಕೆಯನುಸಾರ ವಿವಿಧ ಘಟಕಾಂಶಗಳಿಗೆ ಬಿಡುಗಡೆ ಮಾಡಲಾಗುತ್ತಿದ್ದು, ಗ್ರಾಮ ಪಂಚಾಯತಿವಾರು ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಜಲ ಜೀವನ್ ಮಿಷನ್ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಮೂಲಕ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, ಗ್ರಾಮ ಪಂಚಾಯತಿವಾರು ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ.

ಅಮೃತ ಗ್ರಾಮ ಪಂಚಾಯತಿ ಯೋಜನೆಯಡಿ ಜಿಲ್ಲಾ ಪಂಚಾಯತಿಗಳ ಮೂಲಕ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಲಾಗಿದೆ.

| | | |
|---|---|---|
| (ಇ) | ಗ್ರಾಮ ಪಂಚಾಯಿತಿಗಳು ನಿರ್ವಹಿಸುತ್ತಿರುವ ಕಾರ್ಯಕ್ರಮಗಳಾವುವು? (ವಿವರಗಳನ್ನು ನೀಡುವುದು) | ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆ / ಕಾರ್ಯಕ್ರಮಗಳಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, 15ನೇ ಹಣಕಾಸು ಯೋಜನೆ, ಜಲಜೀವನ್ ಮಿಷನ್, ಸ್ವಚ್ಛ ಭಾರತ ಅಭಿಯಾನ (ಗ್ರಾಮೀಣ) ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ<br><br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 58ರಲ್ಲಿ ಗ್ರಾಮ ಪಂಚಾಯತಿ ಕಡ್ಡಾಯ ಪ್ರಕಾರ್ಯಗಳ ಬಗ್ಗೆ ವಿವರಿಸಲಾಗಿದೆ ಅವು ಈ ಕೆಳಕಂಡಂತಿವೆ<br><br>1) ಪ್ರಾಥಮಿಕ ಶಾಲೆಗೆ ಮಕ್ಕಳ ಸಾರ್ವತ್ರಿಕ ದಾಖಲಾತಿಯನ್ನು ಖಚಿತ ಪಡಿಸಿಕೊಳ್ಳುವುದು<br>2) ಮಕ್ಕಳಿಗೆ ಸಾರ್ವತ್ರಿಕವಾಗಿ ರೋಗ ನಿರೋಧಕ ಚುಚ್ಚುಮದ್ದು ನೀಡುವ ಕಾರ್ಯಕ್ರಮಗಳನ್ನು ಸಾಧಿಸುವುದು.<br>3) ನೈರ್ಮಲ್ಯ ವ್ಯವಸ್ಥೆ ಮತ್ತು ಸರಿಯಾದ ಚರಂಡಿ ವ್ಯವಸ್ಥೆಯನ್ನು ಒದಗಿಸುವುದು<br>4) ಸಾಕಷ್ಟು ರಸ್ತೆ ದೀಪಗಳನ್ನು ಒದಗಿಸುವುದು ಮತ್ತು ವಿದ್ಯುತ್ ಶುಲ್ಕಗಳನ್ನು ನಿಯತವಾಗಿ ಸಂದಾಯ ಮಾಡುವುದು.<br>5) ಗ್ರಾಮ ಪಂಚಾಯತಿಗಳಲ್ಲಿ ನಿಯಿತಪಾತವಾಗಿರುವ ಎಲ್ಲಾ ಸಮುದಾಯ ಆಸ್ತಿಗಳನ್ನು ನಿರ್ವಹಿಸುವುದು.<br>6) ಪ್ರಕರಣ 58-ಎರಲ್ಲಿ ಜೀತಗಾರಿಕೆ ಪದ್ಧತಿ ಸಂಬಂಧದಲ್ಲಿ ವರದಿ ಸಲ್ಲಿಸುವುದು.<br>7) ಪ್ರಕರಣ58-ಬಿರಲ್ಲಿ ಮಾನವ ಘನತೆಗೆ ಕಳಂಕ ತರುವ ಪಾರಂಪರಿಕ, ಸಾಮಾಜಿಕ ಮತ್ತು ಧಾರ್ಮಿಕ ಪದ್ಧತಿಗಳನ್ನು ಪ್ರತಿ ಬಂಧಿಸುವುದು<br>8) ಪ್ರಕರಣ58-ಸಿರಲ್ಲಿ ಮಹಿಳೆಯರಿಗೆ ಲೈಂಗಿಕ ಕಿರುಕುಳ ಆಗದಂತೆ ತಡೆಗಟ್ಟುವುದು<br>9) ಪ್ರಕರಣ58-ಡಿ ರಲ್ಲಿ ಕಂದಾಯ ಭೂಮಿಯನ್ನು ಹೊರತುಪಡಿಸಿ ಒತ್ತುವರಿ ಮಾಡಿಕೊಂಡಿರುವ ಗ್ರಾಮ ಪಂಚಾಯತಿಯ ಸ್ವತ್ತನ್ನು ಪುನಃ ಸ್ವಾಧೀನ ಪಡೆಯುವುದು<br>10) ಪ್ರಕರಣ58-ಇ ರಡಿ ಸ್ವಚ್ಛ ಪರಿಸರವನ್ನು ಕಾಪಾಡುವುದು<br>11) ಅಪಾಯಕಾರಿ ಕಲ್ಲು ಗಣಿಗಾರಿಕೆ, ಕೊಳವೆ ಬಾವಿಗಳನ್ನು, ತೆರೆದ ಬಾವಿಗಳನ್ನು ತೋಡುವುದು ಮತ್ತು ಹೊಂಡಗಳನ್ನು ನಿರ್ಮಿಸುವುದನ್ನು ತಡೆಗಟ್ಟುವುದು<br>12) ಅನುಸೂಚಿ-1ರಲ್ಲಿನ ಕಾರ್ಯಗಳನ್ನು ನಿರ್ವಹಿಸುವುದು<br>13) ಗ್ರಾಮೀಣ ಜನತೆಗೆ ವಿವಿಧ ಇಲಾಖೆಗಳ ಸೇವೆಗಳ ದಾಖಲೆಗಳನ್ನು ತ್ವರಿತವಾಗಿ ಮತ್ತು ಸಮೀಪವಾಗಿ ಒಂದೇ ಸೂರಿನಡಿ ಕಲ್ಪಿಸುವ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ವಿವಿಧ ಇಲಾಖೆಗಳ ಸೇವೆಗಳೊಂದಿಗೆ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಬಾಪೂಜಿ ಸೇವಾ ಕೇಂದ್ರಗಳನ್ನು ಸ್ಥಾಪಿಸಿ 72 ಸೇವೆಗಳನ್ನು ನೀಡಲಾಗುತ್ತಿದೆ |

ಸಂಖ್ಯೆ: ಗ್ರಾಅಪ 129 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು